ಅಲ್ಲಿಗೂ ಇದನ್ನು ವಿಸ್ತರಿಸಬೇಕೆಂದು ತಮ್ಮಲ್ಲಿ ಕಳಕಳಿಯಿಂದ ಮನವಿ ಮಾಡಿಕೊಳ್ಳುತ್ತೇನೆ.

ಶ್ರೀ ಎಸ್.ಎ.ರವೀಂದ್ರನಾಥ್: ನಗರ ಪ್ರದೇಶಗಳಲ್ಲಿ task force committee ಅನ್ನು ಮಾಡಲಿಕ್ಕೆ...

ಅಧ್ಯಕ್ಷರು: ನಗರ ಪ್ರದೇಶಗಳಲ್ಲಿ ಮಾಡಬೇಕೆಂದು ಕೇಳುತ್ತಿದ್ದಾರೆ. ಹಿಂದೆ ರಚನೆಯಾಗಿದ್ದದ್ದು ಗ್ರಾಮಾಂತರ ಪ್ರದೇಶಕ್ಕೆ ಮಾತ್ರ. ಈಗ ನಗರ ಪ್ರದೇಶಗಳಲ್ಲೂ ಆಗಬೇಕೆಂದು ಕೇಳುತ್ತಿದ್ದಾರೆ.

ಶ್ರೀ ಎಸ್.ಎ.ರವೀಂದ್ರನಾಥ್: ಅದನ್ನು ಮಾನ್ಯ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಮಾಡುತ್ತೇವೆ.

ಶ್ರೀ ದಿನೇಶ್ ಗುಂಡೂರಾವ್: ಮಾನ್ಯ ಅಧ್ಯಕ್ಷರೇ, ಅದು ಅವರಿಗೆ ಬರುವುದಿಲ್ಲ. ಅದನ್ನು ಮುಖ್ಯಮಂತ್ರಿಗಳೇ ಹೇಳಬೇಕು.

ಅಧ್ಯಕ್ಷರು: ಮಾನ್ಯ ಮಂತ್ರಿಗಳು ಮಾಡುತ್ತೇವೆಂದು ಹೇಳುತ್ತಿದ್ದಾರೆ. ಇಲ್ಲಿಗೆ ಈ ಪ್ರಶ್ನೆ ಮುಗಿಯಿತು.

* * * * *

ಅಧ್ಯಕ್ಷರು: ನಿರಾಣಿ ಮುರುಗೇಶ್ ರುದ್ರಪ್ಪನವರೆ, ನಿಮ್ಮ ಪ್ರಶ್ನೆ ಸಂಖ್ಯೆ 211ಕ್ಕೆ ಉತ್ತರ ಕೊಡಲು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈಗ ಇಲ್ಲಿ ಇಲ್ಲ. ಆದ್ದರಿಂದ ಇನ್ನೊಂದು ದಿವಸ ಅದಕ್ಕೆ ಉತ್ತರವನ್ನು ಕೊಡಿಸುತ್ತೇನೆ. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಆ) <u>ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:</u>

ಶ್ರೀ ಕೆ.ಎಸ್.ಈಶ್ವರಪ್ಪ (ಜಲಸಂಪನ್ಮೂಲ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಾಂಕ 20–03–2007ರ 14ನೇ ಪಟ್ಟಿಯ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 7 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 105 ಪ್ರಶ್ನೆಗಳ ಪೈಕಿ 44 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ದಿನಾಂಕ 21–03–2007ರ ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳ 15ನೇ ಪಟ್ಟಿಯಲ್ಲಿರುವ 47 ಪ್ರಶ್ನೆಗಳ ಪೈಕಿ 29 ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

<u>ಅನುಬಂಧ–1</u>

ಸಭಾಧ್ಯಕ್ಷರು: ಮಂಡಿಸಲಾಯಿತು

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

1978ರ ಕರ್ನಾಟಕ ರಾಜ್ಯ ನಾಗರೀಕ ಸೇವಾ ಅಧಿನಿಯಮ 8(3)ರ ಪ್ರಕರಣದ ಮೇರೆಗೆ:

1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 9 ಮತ್ತು 10 ಹಾಗೂ ಅನುಸೂಚಿ II ಮತ್ತು IIIಕ್ಕೆ ತಿದ್ದುಪಡಿ ಮಾಡಿ ದಿನಾಂಕ 25.01.2007ರಂದು ಹೊರಡಿಸಲಾದ ಅಧಿಸೂಚನೆ